# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತನಾಲ್ಕನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಸೋಮವಾರ, ದಿನಾಂಕ:09ನೇ ಡಿಸೆಂಬರ್, 2024**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಸಂತಾಪ ಸೂಚನೆಗಳು

## 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

## 03. ಶೂನ್ಯವೇಳೆ ಪ್ರಸ್ತಾವಗಳು

## 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

## 05. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯ ಮುಂದೆ ಮಂಡಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಶಾಂತರಾಮ್ ಬುಡ್ನ** ಸಿದ್ಧಿ ಅವರು ಕರ್ನಾಟಕ ಅರಣ್ಯ ಕಾಯ್ದೆ 1962 ಕಲಂ 28ರ ಅಡಿ ದಿನಾಂಕ:27.04.1978ರ ಪೂರ್ವದಲ್ಲಿ ಅರಣ್ಯ ಅತಿಕ್ರಮಣ ಪ್ರದೇಶವನ್ನು ಸಕ್ರಮಗೊಳಿಸಲಾಗಿದ್ದಾಗ್ಯೂ disforest donatory ಜಾರಿಯಾಗದಿರುವುದರಿಂದ ರೈತರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀ ನಿರಾಣಿ ಹಣಮಂತ್‌ರುದ್ರಪ್ಪ** ಅವರು ಬಾಗಲಕೋಟೆ ಮತ್ತು ವಿಜಯಪುರ ಅವಳಿ ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳಾದ ಬಾದಾಮಿ, ಬನಶಂಕರಿ, ಐಹೊಳೆ, ಪಟ್ಟದಕಲ್ಲು, ಗೋಲಗುಂಬಜ್, ಶಿವನ ಮಂದಿರ, ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ ಬಗೆ ಬಗೆಯ ಪಕ್ಷಿಯ ತಾಣಗಳನ್ನು ನಿರ್ಮಿಸಿ ಅಭಿವೃದ್ಧಿಪಡಿಸುವ ಕುರಿತು ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

03. **ಶ್ರೀ ತಿಪ್ಪಣ್ಣಪ್ಪ ಕಮಕನೂರ** ಅವರು ಕಲಬುರ್ಗಿ ಜಿಲ್ಲೆಯಲ್ಲಿ 30 ಲಕ್ಷ ರೈತರು ಬೆಳೆಯುತ್ತಿರುವ ತೊಗರಿ ಜಿ1–ಟ್ಯಾಗ್ ಕ್ಲಾಸ್–31 ಪ್ರಮಾಣಪತ್ರ 2017ರಿಂದ 2019ರಲ್ಲಿ ದೊರೆತಿದ್ದರೂ ಅದರ ಗುಣಧರ್ಮಕ್ಕೆ ಅನುಗುಣವಾಗಿ ವೈಜ್ಞಾನಿಕ ಬೆಂಬಲ ಬೆಲೆ ಘೋಷಿಸದಿರುವುದರಿಂದ ರೈತರಿಗೆ ನಷ್ಟವುಂಟಾಗುತ್ತಿರುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

04. **ಶ್ರೀ ಗೋವಿಂದರಾಜು** ಅವರು ರಾಜ್ಯದಲ್ಲಿ ವಯೋವೃದ್ಧರಿಗೆ ಮನೆಗಳಲ್ಲಿ ಕಿರುಕುಳ ನೀಡುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವ ಕುರಿತು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಡಾ: ತಳವಾರ್ ಸಾಬಣ್ಣ** ಅವರು ಅತ್ಯಂತ ಹಿಂದುಳಿದ ಜಾತಿಗಳನ್ನು ಒಳಗೊಂಡ ಪ್ರವರ್ಗ–1 ಗುಂಪಿಗೆ ಜನಸಂಖ್ಯೆ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಿನ್ನಲೆ ಪರಿಗಣಿಸದೆ ಅವೈಜ್ಞಾನಿಕವಾಗಿ ಮೀಸಲಾತಿ ಪ್ರಮಾಣವನ್ನು ನಿಗದಿಪಡಿಸಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮಿ ಕೋ–ಆಪರೇಟಿವ್ ಬ್ಯಾಂಕಿನಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಸಿ.ಎನ್. ಮಂಜೇಗೌಡ** ಅವರು ರಾಜ್ಯದಲ್ಲಿ ಅವ್ಯಾಹತವಾಗಿ ನಡೆಯುತ್ತಿರುವ ಸೈಬರ್ ವಂಚನೆ ಪ್ರಕರಣಗಳನ್ನು ತಡೆಯಲು ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**